**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ: 2021 ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.**

**ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ:ಆಇ 5 ಸೇನಿಸೇ 2012, ದಿನಾಂಕ:14.06.2012.**

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 118(2)ರ ಸೌಲಭ್ಯ ಪಡೆಯುವ ಸಲುವಾಗಿ, ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ (ಆಯಾ ವರ್ಷದ ಜನವರಿ 1ರಿಂದ ಡಿಸೆಂಬರ್ 31ರೊಳಗೆ) 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ, ರಜಾ ವೇತನಕ್ಕೆ ಸಮನಾದ ನಗದೀಕರಣ ಪಡೆಯಬಹುದಾದ ಸೌಲಭ್ಯವನ್ನು ದಿ:01/01/2013ರಿಂದ ಜಾರಿಗೊಳಿಸಲಾಗಿದೆ.

ಪ್ರಸ್ತುತ ಕೋವಿಡ್–19ರ ಹಿನ್ನೆಲೆಯಲ್ಲಿ ಸರ್ಕಾರವು ತೀವ್ರ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿರುವ ಹಿನ್ನೆಲೆಯಲ್ಲಿ, 2021ನೇ ಸಾಲಿನ ಕ್ಯಾಲೆಂಡರ್ ವರ್ಷ ದಿನಾಂಕ:01/01/2021 ರಿಂದ ದಿನಾಂಕ:31/12/2021 ರವರೆಗಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 7(ಇ) ಸೇನಿಸೇ 2020 ಬೆಂಗಳೂರು, ದಿನಾಂಕ:04.01.2021**

2021 ನೇ ಸಾಲಿನ ಕ್ಯಾಲೆಂಡರ್ ವರ್ಷ ದಿನಾಂಕ:01/01/2021 ರಿಂದ ದಿನಾಂಕ:31/12/2021 ರವರೆಗಿನ ಅವಧಿಯಲ್ಲಿ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ರದ್ದುಗೊಳಿಸಿದೆ. ಆದರೆ, ಜನವರಿ 2021 ರಿಂದ ಡಿಸೆಂಬರ್ 2021 ರವರೆಗಿನ ಅವಧಿಯಲ್ಲಿ ನಿವೃತ್ತಿ ಹೊಂದುವ ಎಲ್ಲಾ ಅರ್ಹ ನೌಕರರು/ಅಧಿಕಾರಿಗಳು, ಅವರು ನಿವೃತ್ತಿ ಹೊಂದುವ ತಿಂಗಳಲ್ಲಿ ಗಳಿಕೆ ರಜೆ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

ಈ ಆದೇಶವು ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಎಲ್ಲಾ ಕರ್ನಾಟಕ ಸರ್ಕಾರದ ಎಲ್ಲಾ ಉದ್ಯಮಗಳ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

H.R. Lalitha

**(ಹೆಚ್.ಆರ್.ಲಲಿತ),**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು–1 & 3).**

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.**

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್‌ಬಾಕ್ಸ್ ಸಂಖ್ಯೆ–5398, ಬೆಂಗಳೂರು–560001.

8. ಮಹಾಲೇಖಪಾಲರು (ಇ & ಆರ್‌ಎಸ್‌ಎ). ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್.ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
9. ಮಹಾಲೇಖಪಾಲರು (ಎ & ಇ), ಕರ್ನಾಟಕ, ಪೋಸ್ಟ್.ಬಾಕ್ಸ್ ಸಂಖ್ಯೆ-5329/5369, ಪಾರ್ಕ ಹೌಸ್ ರೋಡ್, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

**[ಕ್ರಮ ಸಂಖ್ಯೆ:7 ರಿಂದ 16 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].**

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**